# ಹೆಗ್ಗೆರೆ ತಾಯಮ್ಮ ತಿಪ್ಪೇಸಾಮಿ ಬಾಲಕಿಯರ ಸರ್ಕಾರಿ ಪ್ರೌಢಶಾಲೆ, ಚಳ್ಳಕೆರೆ, ಚಿತ್ರದುರ್ಗ–ಜಿಲ್ಲೆ.

## ಸಂಕಲನಾತ್ಮಕ ಮೌಲ್ಯಮಾಪನ–1: ಸೆಪ್ಟೆಂಬರ್/ಅಕ್ಟೋಬರ್–2019

**ವಿಷಯ** : ಗಣಿತ | **–: ಪ್ರಶ್ನೆ ಪತ್ರಿಕೆ :–** | **ಅಂಕಗಳು** : 80

**ತರಗತಿ** : 10 | **ಅವಧಿ** : 3 ಗಂಟೆಗಳು

**I. ಈ ಕೆಳಗಿನ ಪ್ರಶ್ನೆಗಳಲ್ಲಿ ಪ್ರತಿಯೊಂದು ಪ್ರಶ್ನೆಗೆ ನಾಲ್ಕು ಪರ್ಯಾಯಗಳನ್ನು ನೀಡಲಾಗಿದೆ ಸರಿಯಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಡನೆ ಬರೆಯಿರಿ :** 1×8=8

1. ಒಂದು ಸಮಾಂತರ ಶ್ರೇಢಿಯ ಮೊದಲ ಪದ **a** ಮತ್ತು ಸಾಮಾನ್ಯ ವ್ಯತ್ಯಾಸ **d** ಆದಾಗ ಅದರ **n**ನೇ ಪದವು

   ಎ) $a_n=a+(n-1)d$  ಬಿ) $a_n=\frac{a}{2}+(n-1)d$  ಸಿ) $a_n=\frac{n}{2}+(a-1)d$  ಡಿ) $a_n=d+(n-1)a$

2. ಒಂದು ಸಮಾಂತರ ಶ್ರೇಢಿಯ 5,9,13,. . . . . . ನ 10ನೇ ಪದವು

   ಎ) 36  ಬಿ) 31  ಸಿ) 41  ಡಿ) 21

3. ಈ ಕೆಳಗಿನ ಯಾವ ಸಂದರ್ಭದಲ್ಲಿ ಸಮೀಕರಣಗಳ ಜೋಡಿಗೆ ನಿಖರವಾಗಿ ಒಂದು ಪರಿಹಾರ(ಅನನ್ಯ) ಸಿಗುತ್ತದೆ.

   ಎ) $\frac{a_1}{a_2} \neq \frac{b_1}{b_2}$  ಬಿ) $\frac{a_1}{a_2} = \frac{b_1}{b_2} = \frac{c_1}{c_2}$  ಸಿ) $\frac{a_1}{a_2} = \frac{b_1}{b_2} \neq \frac{c_1}{c_2}$  ಡಿ) $\frac{a_1}{a_2} \neq \frac{b_1}{b_2} \neq \frac{c_1}{c_2}$

4. X- ಅಕ್ಷದ ಮೇಲಿರುವ ಒಂದು ಬಿಂದುವಿನ ನಿರ್ದೇಶಾಂಕಗಳು ಈ ಕೆಳಗಿನ ಯಾವ ರೂಪದಲ್ಲಿರುತ್ತವೆ.

   ಎ) (x, y)  ಬಿ) (x, 0)  ಸಿ) (0, x)  ಡಿ) (y, 0)

5. P(x, y) ಬಿಂದುವಿನಿಂದ ಮೂಲಬಿಂದುವಿಗಿರುವ ದೂರವನ್ನು ಕಂಡುಹಿಡಿಯಲು ಬಳಸುವ ಸೂತ್ರ

   ಎ)$\sqrt{(x+y)}$  ಬಿ)$\sqrt{(x+y)^2}$  ಸಿ)$\sqrt{x^2+y^2}$  ಡಿ) $\sqrt{x^2-y^2}$

6. ಎಲ್ಲಾ ವರ್ಗಗಳು

   ಎ) ಸಮ  ಬಿ) ಸರ್ವಸಮ  ಸಿ) ಒಂದೇ ವಿಸ್ತೀರ್ಣ ಹೊಂದಿರುತ್ತವೆ  ಡಿ) ಸಮರೂಪ

7. ಒಂದು ವೃತ್ತಕ್ಕೆ ಬಾಹ್ಯ ಬಿಂದುವಿನಿಂದ ಎಳೆಯಬಹುದಾದ ಸ್ಪರ್ಶಕಗಳ ಸಂಖ್ಯೆ ________

   ಎ) 1  ಬಿ) 2  ಸಿ) 3  ಡಿ) 4

8. ಒಂದು ವೃತ್ತದ ಪರಿಧಿಯನ್ನು ಕಂಡು ಹಿಡಿಯುವ ಸೂತ್ರ ––––––––––––

   ಎ) $2\pi r$  ಬಿ) $2\pi r^2$  ಸಿ) $4\pi r$  ಡಿ) $\pi r^2$

**II. ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** 1×8=8

9. ಒಂದು ಸಮಾಂತರ ಶ್ರೇಢಿಯ ಮೊದಲನೇ ಪದ ಮತ್ತು ಸಾಮಾನ್ಯ ವ್ಯತ್ಯಾಸವು ಕ್ರಮವಾಗಿ 6 ಮತ್ತು 5 ಆಗಿದೆ. ಆ ಶ್ರೇಢಿಯ 3ನೇ ಪದವನ್ನು ಕಂಡುಹಿಡಿಯಿರಿ.

10. ಒಂದು ಸಮಾಂತರ ಶ್ರೇಢಿಯ $n$ನೇ ಪದವು $4n^2-1$ ಆದರೆ ಅದರ 8ನೇ ಪದವನ್ನು ಕಂಡುಹಿಡಿಯಿರಿ.

11. ಕೆಳಗಿನ ರೇಖಾತ್ಮಕ ಸಮೀಕರಣಗಳ ಜೋಡಿಗಳು ಪ್ರತಿನಿಧಿಸುವ ರೇಖೆಗಳು ಒಂದು ಬಿಂದುವಿನಲ್ಲಿ ಛೇದಿಸುತ್ತವೆಯೇ? ಸಮಾಂತರವಾಗಿವೆಯೇ? ಅಥವಾ ಐಕ್ಯಗೊಂಡಿವೆಯೇ? ಎಂಬುದನ್ನು ಕಂಡುಹಿಡಿಯಿರಿ. $9x+3y+12=0$

    $18x+6y+24=0$

12. (6,2) ಮತ್ತು (4,4) ಬಿಂದುಗಳನ್ನು ಸೇರಿಸುವ ರೇಖಾಖಂಡದ ಮಧ್ಯಬಿಂದುವಿನ ನಿರ್ದೇಶಾಂಕಗಳನ್ನು ಕಂಡುಹಿಡಿಯಿರಿ.

13. ತ್ರಿಭುಜ ABC ಯಲ್ಲಿ DE∥BC, DE=5cm, BC=8cm ಮತ್ತು AD=3.5cm ಆದರೆ AB ಯ ಉದ್ದವನ್ನು ಕಂಡುಹಿಡಿಯಿರಿ.




14. 'ಮೂಲ ಸಮಾನುಪಾತತೆಯ ಪ್ರಮೇಯ'ವನ್ನು ನಿರೂಪಿಸಿ.

15. ಒಂದು ಬಿಂದು Q ದಿಂದ, ವೃತ್ತಕ್ಕೆ ಎಳೆದ ಸ್ಪರ್ಶಕದ ಉದ್ದವು 24ಸೆಂ.ಮೀ. ಮತ್ತು ವೃತ್ತಕೇಂದ್ರ ಹಾಗೂ Q ಬಿಂದು ನಡುವಿನ ದೂರ 25ಸೆಂ.ಮೀ ಆದರೆ ವೃತ್ತದ ತ್ರಿಜ್ಯವನ್ನು ಕಂಡುಹಿಡಿಯಿರಿ.




HTTGHS, CHALAKERE

16. ಒಂದು ವೃತ್ತದ ಸುತ್ತಳತೆಯು ಅದರ ವಿಸ್ತೀರ್ಣಕ್ಕೆ ಸಾಂಖ್ಯಿಕವಾಗಿ ಸಮವಾಗಿದ್ದರೆ ಆ ವೃತ್ತದ ತ್ರಿಜ್ಯವನ್ನು ಕಂಡುಹಿಡಿಯಿರಿ.

**III. ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **2×8=16**

17. ಒಂದು ಸಮಾಂತರ ಶ್ರೇಡಿಯ ಎರಡನೇ ಮತ್ತು ಮೂರನೇ ಪದಗಳು ಕ್ರಮವಾಗಿ 14 ಮತ್ತು 18 ಆದರೆ ಅದರ 51 ಪದಗಳವರೆಗಿನ ಮೊತ್ತವೇನು?

18. ಮೂರನೇ ಪದ 16, 7ನೇ ಪದವು 5ನೇ ಪದಕ್ಕಿಂತ 12 ಹೆಚ್ಚಾಗಿರುವ ಸಮಾಂತರ ಶ್ರೇಡಿ ಕಂಡುಹಿಡಿಯಿರಿ.

19. ಬಿಡಿಸಿ : $3x+4y = 10$

$2x-2y = 2$

20. A(8,-3) ಮತ್ತು B(0,9) ಬಿಂದುಗಳ ನಡುವಿನ ದೂರವನ್ನು 'ದೂರ ಸೂತ್ರ' ಬಳಸಿ ಕಂಡುಹಿಡಿಯಿರಿ.

21. 10ಮೀ. ಎತ್ತರವಿರುವ ಏಣಿಯು ನೆಲದಿಂದ 8ಮೀ. ಎತ್ತರದಲ್ಲಿ ಗೋಡೆಯಲ್ಲಿರುವ ಕಿಟಕಿಯನ್ನು ಮುಟ್ಟುತ್ತದೆ ಹಾಗಾದರೆ ಏಣಿಯ ಪಾದವು ನೆಲದಿಂದ ಎಷ್ಟು ದೂರದಲ್ಲಿದೆ?

**ಅಥವಾ**

ಎರಡು ಸಮರೂಪ ತ್ರಿಭುಜಗಳ ಸುತ್ತಳತೆಯು 25ಸೆಂ.ಮೀ. ಮತ್ತು 15ಸೆಂ.ಮೀ ಗಳಾಗಿವೆ. ಮೊದಲನೆಯ ತ್ರಿಭುಜದ ಒಂದು ಬಾಹುವಿನ ಅಳತೆಯು 9ಸೆಂ.ಮೀ ಆದರೆ, ಮತ್ತೊಂದು ತ್ರಿಭುಜದ ಅನುರೂಪ ಬಾಹುವಿನ ಅಳತೆಯನ್ನು ಕಂಡುಹಿಡಿಯಿರಿ.

22. ಒಂದು ವೃತ್ತಕ್ಕೆ ವ್ಯಾಸದ ಅಂತ್ಯ ಬಿಂದುವಿನಲ್ಲಿ ಎಳೆದ ಸ್ಪರ್ಶಕಗಳು ಪರಸ್ಪರ ಸಮಾಂತರವಾಗಿವೆ ಎಂದು ಸಾಧಿಸಿ.

23. 4 ಸೆಂ.ಮೀ. ತ್ರಿಜ್ಯವುಳ್ಳ ವೃತ್ತವನ್ನು ಎಳೆದು ಅದರ ಕೇಂದ್ರದಿಂದ 8 ಸೆಂ.ಮೀ. ದೂರದಲ್ಲಿರುವ ಒಂದು ಬಿಂದುವಿನಿಂದ ವೃತ್ತಕ್ಕೆ ಒಂದು ಜೊತೆ ಸ್ಪರ್ಶಕಗಳನ್ನು ರಚಿಸಿ.

24. 15ಮೀ. ಬಾಹುವಿರುವ ಚೌಕಾಕಾರದ ಒಂದು ಹುಲ್ಲಿನ ಮೈದಾನದ ಮೂಲೆಯಲ್ಲಿರುವ ಒಂದು ಗೂಟಕ್ಕೆ ಕುದುರೆಯೊಂದನ್ನು 5ಮೀ ಉದ್ದದ ಹಗ್ಗದಿಂದ ಕಟ್ಟಿದೆ.(ಚಿತ್ರವನ್ನು ನೋಡಿರಿ) ಕುದುರೆಯು ಹುಲ್ಲನ್ನು ಮೇಯಬಹುದಾದ ಮೈದಾನದ ಭಾಗದ ವಿಸ್ತೀರ್ಣವನ್ನು ಕಂಡುಹಿಡಿಯಿರಿ.



**IV. ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **3×9=27**

25. ಒಂದು ಶಾಲೆಯ ವಿದ್ಯಾರ್ಥಿಗಳ ಸಮಗ್ರ ವಾರ್ಷಿಕ ನಿರ್ವಹಣೆಗಾಗಿ ಏಳು ನಗದು ಬಹುಮಾನಕ್ಕಾಗಿ ರೂ.700ರ ಮೊತ್ತವನ್ನು ನೀಡಲಾಗಿತ್ತು. ಪ್ರತಿ ಬಹುಮಾನವು ಅದರ ಮುಂಚಿನ ಬಹುಮಾನಕ್ಕಿಂತ ರೂ.20 ಕಡಿಮೆಯಾದರೆ ಪ್ರತಿ ಬಹುಮಾನಗಳ ಮೌಲ್ಯ ಎಷ್ಟು?

**ಅಥವಾ**

ಒಂದು ಹೂ ಹಾಸಿನ ಮೊದಲನೇ ಸಾಲಿನಲ್ಲಿ 23 ಗುಲಾಬಿ ಗಿಡಗಳಿವೆ. 2ರಲ್ಲಿ 21, 3ರಲ್ಲಿ 19 ಹೀಗೆ ಮುಂದುವರೆಯುತ್ತದೆ. ಕೊನೆಯ ಸಾಲಿನಲ್ಲಿ 5 ಗುಲಾಬಿ ಗಿಡಗಳಿದ್ದರೆ ಆ ಹೂ ಹಾಸಿನಲ್ಲಿರುವ ಸಾಲುಗಳ ಸಂಖ್ಯೆ ಎಷ್ಟು?

26. ಐದು ವರ್ಷಗಳ ಹಿಂದೆ ನೂರಿಯ ವಯಸ್ಸು ಸೋನುವಿನ ವಯಸ್ಸಿನ ಮೂರು ಪಟ್ಟು ಆಗಿತ್ತು. ಹತ್ತು ವರ್ಷಗಳ ಬಳಿಕ ನೂರಿಯ ವಯಸ್ಸು ಸೋನುವಿನ ವಯಸ್ಸಿನ ಎರಡು ಪಟ್ಟು ಆಗುತ್ತದೆ. ಹಾಗಾದರೆ ನೂರಿ ಹಾಗೂ ಸೋನುವಿನ ಈಗಿನ ವಯಸ್ಸೆಷ್ಟು?

**ಅಥವಾ**

ಎರಡು ಪರಿಪೂರಕ ಕೋನಗಳಲ್ಲಿ ದೊಡ್ಡ ಕೋನವು ಚಿಕ್ಕ ಕೋನಕ್ಕಿಂತ 18 ಡಿಗ್ರಿ ಅಧಿಕವಾಗಿದೆ. ಅವುಗಳನ್ನು ಕಂಡುಹಿಡಿಯಿರಿ.

27. A(2,2), B(4,4) ಮತ್ತು C(2,6) ಶೃಂಗಗಳನ್ನು ಹೊಂದಿರುವ ತ್ರಿಭುಜದ ಬಾಹುಗಳ ಮಧ್ಯಬಿಂದುವನ್ನು ಸೇರಿಸಿದಾಗ ಉಂಟಾಗುವ ತ್ರಿಭುಜದ ವಿಸ್ತೀರ್ಣವನ್ನು ಕಂಡುಹಿಡಿಯಿರಿ.

28. (4,–1) ಮತ್ತು (–2,–3) ಬಿಂದುಗಳನ್ನು ಸೇರಿಸುವ ರೇಖಾಖಂಡದ ತ್ರೈಭಾಜಕ ಬಿಂದುಗಳ ನಿರ್ದೇಶಾಂಕಗಳನ್ನು ಕಂಡುಹಿಡಿಯಿರಿ.

HTGGHS, CHALLAKERE

**ಅಥವಾ**

(−2, 1), (4,6) ಮತ್ತು (6,−3) ನಿರ್ದೇಶಾಂಕಗಳು ತ್ರಿಭುಜದ ಶೃಂಗಗಳಾದರೆ, ಆ ತ್ರಿಭುಜದ ಸುತ್ತಳತೆಯನ್ನು ಕಂಡುಹಿಡಿಯಿರಿ.

29. ‘ಒಂದು ವೃತ್ತಕ್ಕೆ ಅದರ ಬಾಹ್ಯ ಬಿಂದುವಿನಿಂದ ಎಳೆದ ಸ್ಪರ್ಶಕಗಳು ಸಮನಾಗಿರುತ್ತವೆ’ ಎಂದು ಸಾಧಿಸಿ.

30. ಎರಡು ಏಕಕೇಂದ್ರೀಯ ವೃತ್ತಗಳ ತ್ರಿಜ್ಯಗಳು 5ಸೆಂ.ಮೀ. ಮತ್ತು 3ಸೆಂ.ಮೀ. ಆಗಿವೆ. ಚಿಕ್ಕ ವೃತ್ತಕ್ಕೆ ಸ್ಪರ್ಶಿಸುವಂತೆ ದೊಡ್ಡ ವೃತ್ತದ ಜ್ಯಾದ ಉದ್ದವನ್ನು ಕಂಡುಹಿಡಿಯಿರಿ.

31. 4 ಸೆಂ.ಮೀ, 5ಸೆಂ.ಮೀ ಮತ್ತು 6 ಸೆಂ.ಮೀ ಬಾಹುಗಳಿರುವ ಒಂದು ತ್ರಿಭುಜವನ್ನು ರಚಿಸಿ ನಂತರ ಇದಕ್ಕೆ ಸಮರೂಪವಾಗಿರುವ ಮತ್ತೊಂದು ತ್ರಿಭುಜವನ್ನು ರಚಿಸಿ. ರಚಿಸಬೇಕಾದ ಈ ತ್ರಿಭುಜದ ಪ್ರತಿಯೊಂದು ಬಾಹುವು ಮೊದಲು ರಚಿಸಿದ ತ್ರಿಭುಜದ ಅನುರೂಪ ಬಾಹುಗಳ $\frac{2}{3}$ ರಷ್ಟು ಇರಬೇಕು.

32. ಪಾದ BC=8cm ಮತ್ತು ಎತ್ತರ 4cm ಇರುವ ಒಂದು ಸಮದ್ವಿಬಾಹು ತ್ರಿಭುಜ ABC ಯನ್ನು ರಚಿಸಿ. ನಂತರ ಮತ್ತೊಂದು ತ್ರಿಭುಜವನ್ನು ಅದರ ಬಾಹುಗಳು ABC ಸಮದ್ವಿಬಾಹು ತ್ರಿಭುಜದ ಅನುರೂಪ ಬಾಹುಗಳ $\frac{5}{3}$ ರಷ್ಟಿರುವಂತೆ ರಚಿಸಿ.

33. ABCD ಯು 14 ಸೆಂ.ಮೀ. ಬಾಹುವಿರುವ ಒಂದು ಚೌಕವಾದರೆ, ಚಿತ್ರದಲ್ಲಿ ಛಾಯೆಗೊಳಿಸಿದ ವಲಯದ ವಿಸ್ತೀರ್ಣವನ್ನು ಕಂಡುಹಿಡಿಯಿರಿ.




**V. ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** 4×4=16

34. ಒಂದು ಸಮಾಂತರ ಶ್ರೇಢಿಯ 4ನೇ ಮತ್ತು 8ನೇ ಪದಗಳ ಮೊತ್ತ 24 ಮತ್ತು 6ನೇ ಮತ್ತು 10ನೇ ಪದಗಳ ಮೊತ್ತ 44 ಆದರೆ ಆ ಶ್ರೇಢಿಯ ಮೊದಲ ಮೂರು ಪದಗಳನ್ನು ಕಂಡುಹಿಡಿಯಿರಿ.

**ಅಥವಾ**

ಒಂದು ಸಮಾಂತರ ಶ್ರೇಢಿಯ ಮೊದಲ 8 ಪದಗಳ ಮೊತ್ತ 136 ಮತ್ತು ಅದರ ಮೊದಲ 15 ಪದಗಳವರೆಗಿನ ಮೊತ್ತ 465 ಆದರೆ ಆ ಶ್ರೇಢಿಯ ಮೊದಲ 25 ಪದಗಳ ಮೊತ್ತವನ್ನು ಕಂಡುಹಿಡಿಯಿರಿ.

35. “ಎರಡು ಸಮರೂಪ ತ್ರಿಭುಜಗಳ ವಿಸ್ತೀರ್ಣಗಳ ಅನುಪಾತವು ಅವುಗಳ ಅನುರೂಪ ಬಾಹುಗಳ ವರ್ಗಗಳ ಅನುಪಾತಕ್ಕೆ ಸಮನಾಗಿರುತ್ತದೆ.” ಎಂದು ಸಾಧಿಸಿ.

36. ನಕ್ಷೆಯ ಕ್ರಮದಿಂದ ಬಿಡಿಸಿ : $2x + y - 6 = 0$

$4x - 2y - 4 = 0$

37. ಚಿತ್ರದಲ್ಲಿ OABC ಚೌಕವು OPBQ ವೃತ್ತ ಚತುರ್ಥಕದಲ್ಲಿ ಅಂತಸ್ಥವಾಗಿದೆ. OA=20cm ಆದರೆ ಛಾಯೆಗೊಳಿಸಿದ ಭಾಗದ ವಿಸ್ತೀರ್ಣವನ್ನು ಕಂಡುಹಿಡಿಯಿರಿ. ($\pi$=3.14 ಎಂದು ಬಳಸಿ)




**ಅಥವಾ**

ಚಿತ್ರದಲ್ಲಿ ಕೇಂದ್ರ ‘O’ ಇರುವ ಎರಡು ಏಕಕೇಂದ್ರೀಯ ವೃತ್ತಗಳ ತ್ರಿಜ್ಯಗಳು ಕ್ರಮವಾಗಿ 7 ಸೆಂ.ಮೀ ಮತ್ತು 14ಸೆಂ.ಮೀ ಇವೆ. ಮತ್ತು $\angle AOC = 40^0$ ಆದರೆ ಚಿತ್ರದಲ್ಲಿ ಛಾಯೀಕೃತ ಭಾಗದ ವಿಸ್ತೀರ್ಣವನ್ನು ಕಂಡುಹಿಡಿಯಿರಿ.




**V. ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** 5×1=5

38. ಪೈಥಾಗೋರಸ್‌ನ ಪ್ರಮೇಯವನ್ನು ನಿರೂಪಿಸಿರಿ ಮತ್ತು ಸಾಧಿಸಿರಿ.

HTGGHS, CHALLAKERE